**ಕರ್ನಾಟಕ ವಿಧಾನ ಪರಿಷತ್ತು**

(1) ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: : 1081
(2) ಸದಸ್ಯರ ಹೆಸರು : ಶ್ರೀ ಮರಿತಿಬ್ಬೇಗೌಡ (ಶಿಕ್ಷಕರಕ್ಷೇತ್ರ)
(3) ಉತ್ತರಿಸಬೇಕಾದ ದಿನಾಂಕ: : 22.09.2022
(4) ಉತ್ತರಿಸುವ ಸಚಿವರು : ಮಾನ್ಯ ಕಾನೂನು ಮತ್ತು ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು.

| ಪ್ರಶ್ನೆ | ಉತ್ತರ |
|---|---|
| ಅ) ನಗರ, ತಾಲ್ಲೂಕು ಹಾಗೂ ಜಿಲ್ಲಾ ಕೇಂದ್ರಗಳ ನ್ಯಾಯಾಲಯದ ಕಟ್ಟಡಗಳಲ್ಲಿ ಮೂಲಭೂತ ಸೌಕರ್ಯಗಳು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು. |
| ಆ) ಬಂದಿದ್ದಲ್ಲಿ, ಯಾವ ಸೌಲಭ್ಯಗಳ ಕೊರತೆ ಇದೆ; | ಜಿಲ್ಲಾ ನ್ಯಾಯಾಂಗದಲ್ಲಿ ಕೆಲವು ನ್ಯಾಯಾಲಯ ಸಭಾಂಗಣಗಳು, ನ್ಯಾಯಾಲಯ ಕಟ್ಟಡಗಳು ಮತ್ತು ನ್ಯಾಯಾಂಗ ಅಧಿಕಾರಿಗಳ ವಸತಿ ಗೃಹಗಳ ಅವಶ್ಯಕತೆ ಇದೆ. |
| ಇ) ನ್ಯಾಯಾಲಯಕ್ಕೆ ಬರುವ ಕಕ್ಷಿದಾರರು ಹಾಗೂ ಸಾರ್ವಜನಿಕರಿಗೆ ಅಗತ್ಯವಿರುವ ಕುಡಿಯುವ ನೀರು, ಶೌಚಾಲಯ, ಆಸನ ವ್ಯವಸ್ಥೆ ಸಮರ್ಪಕವಾಗಿ ನಿರ್ವಹಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;<br><br>ಈ) ಇದುವರೆವಿಗೂ ಈ ಸೌಲಭ್ಯಗಳನ್ನು ಕಲ್ಪಿಸದಿರಲು ಕಾರಣಗಳೇನು? | ಜಿಲ್ಲಾ ನ್ಯಾಯಾಂಗದ ಎಲ್ಲಾ ನ್ಯಾಯಾಲಯಗಳ ಕಟ್ಟಡಗಳಲ್ಲಿ ಈಗಾಗಲೇ ಶುದ್ಧ ಕುಡಿಯುವ ನೀರಿನ (RO Plant) ವ್ಯವಸ್ಥೆಯನ್ನು ಮಾಡಲಾಗಿದೆ.<br><br>ನ್ಯಾಯಾಲಯ ಕಟ್ಟಡಗಳ ಪ್ರತಿ ಮಹಡಿಯಲ್ಲಿ ಪುರುಷರು, ಮಹಿಳೆಯರು ಮತ್ತು ದೈಹಿಕ ವಿಕಲಚೇತನರಿಗೆ ಪ್ರತ್ಯೇಕವಾಗಿ ಶೌಚಾಲಯಗಳ ವ್ಯವಸ್ಥೆಯನ್ನು ಕಲ್ಪಿಸಲಾಗಿದೆ.<br><br>2 - 4 ಮಹಡಿಗಳನ್ನು ಹೊಂದಿರುವ ನ್ಯಾಯಾಲಯದ ಕಟ್ಟಡಗಳಿಗೆ ಲಿಫ್ಟ್ ಸೌಲಭ್ಯವನ್ನು ಒದಗಿಸಲಾಗಿದೆ. ಹಾಗೂ ಜಿಲ್ಲಾ ನ್ಯಾಯಾಂಗದ ಎಲ್ಲಾ ನ್ಯಾಯಾಲಯದ ಕಟ್ಟಡಗಳಲ್ಲಿ ಕಕ್ಷಿದಾರರಿಗೆ ಕುರ್ಚಿ ಸೇರಿದಂತೆ ಪೀಠೋಪಕರಣಗಳ ವ್ಯವಸ್ಥೆಯನ್ನು ಕಲ್ಪಿಸಲಾಗಿದೆ. |

ಲಾ-ಎಲ್‌ಸಿಇ/254/2022

(ಜೆ.ಸಿ.ಮಾಧುಸ್ವಾಮಿ)
ಕಾನೂನು ಮತ್ತು ಸಂಸದೀಯ
ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ
ಸಣ್ಣ ನೀರಾವರಿ ಸಚಿವರು.